ಕು.ಶೋಭಾ ಕರಂದ್ಲಾಜೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಬೇಲೂರು ತಾಲ್ಲೂಕಿನ 41 ಜನವಸತಿಗಳು ಕುಡಿಯುವ ನೀರಿನ ತೊಂದರೆಗೊಳಗಾಗಿವೆ.

ಆ) ಅನುಮೋದಿತ ಕ್ರಿಯಾಯೋಜನೆಯಂತೆ ನೀರು ಸರಬರಾಜು ಪ್ರಮಾಣವನ್ನು ಹೆಚ್ಚಿಸಲು ಕಾರ್ಯಸಿಂಧುತ್ವವಿರುವ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಇ) ಈಗಾಗಲೇ, ಯಗಚಿ ಜಲಾಶಯ ಆಧಾರಿತ ನೀರು ಸರಬರಾಜು ಯೋಜನೆ ಅನುಷ್ಠಾನದಲ್ಲಿದ್ದು, ಬೇಲೂರು ತಾಲ್ಲೂಕಿನ ಮಾರ್ಗಮಧ್ಯದ 12 ಗ್ರಾಮಗಳು ಈ ಯೋಜನೆಯಡಿ ಆವರಿಸಲ್ಪಡಲಿವೆ. ಇದಲ್ಲದೆ, ಸದ್ಯಕ್ಕೆ ಇತರೆ ಯಾವುದೇ ಯೋಜನೆ ಸರ್ಕಾರದ ಮುಂದಿರುವುದಿಲ್ಲ.

881 ಶ್ರೀ ನಾಗೇಂದ್ರ ಬಿ. (ಕೂಡ್ಲಿಗಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆ ಕೂಡ್ಲಿಗಿ ತಾಲ್ಲೂಕಿಗೆ ಕಳೆದ ಎರಡು ವರ್ಷಗಳಿಂದ, ವಿವಿಧ ಯೋಜನೆ ಮತ್ತು ಲೆಕ್ಕ ಶೀರ್ಷಿಕೆ ಅಡಿಯಲ್ಲಿ ರಸ್ತೆ ಹಾಗೂ ನೀರು ಸರಬರಾಜು ಯೋಜನೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು;

ಆ) ಕಳೆದ ಎರಡು ವರ್ಷಗಳಿಂದ ವಿವಿಧ ಯೋಜನೆ ಮತ್ತು ಲೆಕ್ಕ ಶೀರ್ಷಿಕೆ ಅಡಿಯಲ್ಲಿ ರಸ್ತೆ ಹಾಗೂ ನೀರು ಸರಬರಾಜು ಯೋಜನೆಗೆ ತೆಗೆದುಕೊಂಡ ಕಾಮಗಾರಿಗಳು ಯಾವುವು (ಯೋಜನೆ ಮತ್ತು ಲೆಕ್ಕ ಶೀರ್ಷಿಕೆಗಳ ಪ್ರಕಾರ ಸಂಪೂರ್ಣ ವಿವರ ಒದಗಿಸುವುದು);

ಇ) ಕಳೆದ ವರ್ಷಗಳಿಂದ ತೆಗೆದುಕೊಂಡ ರಸ್ತೆ ಮತ್ತು ನೀರು ಸರಬರಾಜು ಯೋಜನೆಗಳು ಯಾವ ಹಂತದಲ್ಲಿರುತ್ತದೆ ಹಾಗೂ ಈ ಕಾಮಗಾರಿಗಳು ಪೂರ್ಣಗೊಂಡಿವೆಯೇ (ಸಂಪೂರ್ಣ ಮಾಹಿತಿ ನೀಡುವುದು)?

ಕು.ಶೋಭಾ ಕರಂದ್ಲಾಜೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಕಳೆದ 2 ವರ್ಷಗಳಲ್ಲಿ ಕುಡಿಯುವ ನೀರು ಮತ್ತು ರಸ್ತೆ ಬಾಬ್ತಿಗಾಗಿ ಕ್ರಮವಾಗಿ ಒಟ್ಟು ರೂ.7.81 ಕೋಟಿ ಮತ್ತು ರೂ.7.80 ಕೋಟಿ ಅನುದಾನ ಬಿಡುಗಡೆಯಾಗಿದೆ.

ಆ) ಕುಡಿಯುವ ನೀರಿನ ಬಾಬ್ತಿನ (ರಾಜ್ಯ ಮತ್ತು ಕೇಂದ್ರ) 4215 ಲೆಕ್ಕ ಶೀರ್ಷಿಕೆಯಡಿ 254 ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದೆ. ಅಂತೆಯೇ ರಸ್ತೆ ಬಾಬ್ತಿನ 3054 ಲೆಕ್ಕ ಶೀರ್ಷಿಕೆಯಡಿ 42 ಕಾಮಗಾರಿಗಳು, 5054 ಲೆಕ್ಕ

ಶೀರ್ಷಿಕೆಯಡಿ 31 ಕಾಮಗಾರಿಗಳು, ಮತ್ತು 12ನೇ ಹಣಕಾಸು ಲೆಕ್ಕ ಶೀರ್ಷಿಕೆಯಡಿ 32 ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದೆ.

ಇ) 105 ರಸ್ತೆ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, 59 ಕಾಮಗಾರಿಗಳು ಪೂರ್ಣಗೊಂಡಿವೆ. 26 ಕಾಮಗಾರಿಗಳು ಪ್ರಗತಿಯಲ್ಲಿವೆ ಮತ್ತು 20 ಕಾಮಗಾರಿಗಳು ಪ್ರಾರಂಭಿಕ ಹಂತದಲ್ಲಿವೆ. 87 ಕುಡಿಯುವ ನೀರಿನ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. 106 ಕಾಮಗಾರಿಗಳು ಪ್ರಗತಿಯಲ್ಲಿವೆ ಮತ್ತು 61 ಕಾಮಗಾರಿಗಳು ಪ್ರಾರಂಭಿಕ ಹಂತದಲ್ಲಿವೆ.

1005 ಶ್ರೀ ಸುನೀಲ್ ವಿ.ಹೆಗಡೆ (ಹಳಿಯಾಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್, ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಳಿಯಾಳ–ಜೋಯಿಡಾ ತಾಲ್ಲೂಕಿನ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿನ ತೊಂದರೆಯಿರುವುದು ಸರ್ಕಾರದ ಗಮನದಲ್ಲಿದೆಯೇ;

ಆ) ಹಾಗಿದ್ದಲ್ಲಿ, ಈ ತೊಂದರೆಯನ್ನು ನೀಗಿಸಲು ಕಾಳಿ ನದಿಯಿಂದ ಕುಡಿಯುವ ನೀರನ್ನು ಪೂರೈಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಎಂದಿನಿಂದ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳ ಲಾಗುವುದು?

ಕು.ಶೋಭಾ ಕರಂದ್ಲಾಜೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಈ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ತೀವ್ರ ತೊಂದರೆ ಯಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಮತ್ತು ಇ) ಇಲ್ಲ.

ಸ್ಥಳೀಯ ಅಗತ್ಯತೆ ಆಧರಿಸಿ ಕಾರ್ಯಸಿಂಧುತ್ವವಿರುವ ಯೋಜನೆ ಗಳನ್ನು ರೂಪಿಸಿ ಅನುದಾನ ಲಭ್ಯತೆ ಆಧರಿಸಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳ ಲಾಗುವುದು.

1134 ಶ್ರೀ ಗೋಪಾಲಕೃಷ್ಣ ಎನ್.ವೈ. (ಮೊಳಕಾಲ್ಮೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆಯಿರುವುದು ಹಾಗೂ ಕುಡಿಯುವ ನೀರಿನಲ್ಲಿ ಫ್ಲೋರೈಡ್ ಅಂಶವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;